## 35. ಆರ್ಥಿಕತೆಗೆ ಶಕ್ತಿ ತುಂಬಲು ಆರ್‌ಬಿಐ ಹರಸಾಹಸ

ಕೋವಿಡ್–19 ಬಿಕ್ಕಟ್ಟು ಮತ್ತು ಲಾಕ್‌ಡೌನ್ ಪರಿಣಾಮ ಸ್ಥಗಿತವಾಗಿರುವ ಆರ್ಥಿಕ ಚಟುವಟಿಕೆಗಳಿಗೆ ಚೈತನ್ಯ ತುಂಬಲು ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಅನಿರೀಕ್ಷಿತವಾಗಿ ಅಲ್ಪಾವಧಿಯ ಸಾಲದ ಬಡ್ಡಿ ದರವನ್ನು (ರೆಪೊ) ಶೇ.4.4ರಿಂದ ಶೇ.4ಕ್ಕೆ ಕಡಿತಗೊಳಿಸಿದೆ. ಕಳೆದ ಮಾರ್ಚ್ 27ರಂದು ರೆಪೊ ದರ ಕಡಿತಗೊಳಿಸಲಾಗಿತ್ತು. ಇದರ ಪರಿಣಾಮ ಗೃಹ ಸಾಲ, ವಾಹನ ಸಾಲ, ಕಾರ್ಪೊರೇಟ್ ಸಾಲಗಳ ಇಎಂಐ ಇಳಿಕೆಯಾಗಲಿದೆ. ಆದರೆ, ನಿಶ್ಚಿತ ಠೇವಣಿಗಳ ಬಡ್ಡಿ ದರಗಳೂ ಇಳಿಕೆಯಾಗಲಿದೆ. ಮುಖ್ಯವಾಗಿ ಹಿರಿಯ ನಾಗರಿಕರಿಗೆ ಮತ್ತು ಪಿಂಚಣಿದಾರರಿಗೆ ಬಡ್ಡಿ ಆದಾಯ ಕಡಿಮೆಯಾಗಲಿರುವುದು ಕಳವಳಕ್ಕೆ ಕಾರಣವಾಗಿದೆ.

ಕಳೆದ ಮಾರ್ಚ್ ನಂತರ ಎರಡನೇ ಬಾರಿಗೆ ರೆಪೊ ದರವನ್ನು ಇಳಿಸಲಾಗಿದೆ. ಶೇ.4ರ ರೆಪೊ ದರವು 2000ದಿಂದೀಚೆಗೆ ಅತ್ಯಂತ ಕಡಿಮೆ ಮಟ್ಟದ ಬಡ್ಡಿ ದರವಾಗಿದೆ. ರಿವರ್ಸ್ ರೆಪೊ ದರವನ್ನು ಶೇ.3.75ರಿಂದ 3.35ಕ್ಕೆ ಕಡಿತಗೊಳಿಸಲಾಗಿದೆ. ಅಗತ್ಯವಿದ್ದರೆ ಭವಿಷ್ಯದಲ್ಲಿ ಮತ್ತಷ್ಟು ಬಡ್ಡಿ ದರ ಕಡಿತ ಘೋಷಿಸಲಾಗುವುದು ಎಂದು ಆರ್‌ಬಿಐ ಗವರ್ನರ್ ಶಕ್ತಿಕಾಂತ ದಾಸ್ ತಿಳಿಸಿದ್ದಾರೆ.

ಆರ್‌ಬಿಐ ಎಲ್ಲಾ ಅವಧಿ ಸಾಲಗಳ ಇಎಂಐ ಮರುಪಾವತಿಯ ಅವಧಿಯನ್ನು ಜೂನ್ 1ರಿಂದ ಆಗಸ್ಟ್ 31ಕ್ಕೆ ಮುಂದೂಡಿದೆ. ಕೊರೊನಾ ಸಂಕಟದ ಕಾರಣ ಸಾಲದ ಇಎಂಐ ಕಟ್ಟಲು ಕಷ್ಟ ಎಂಬ ಕಾರಣದಿಂದ ಈಗಾಗಲೇ ಏಪ್ರಿಲ್‌ನಿಂದ ಮೇ ತನಕ ಮುಂದೂಡಲಾಗಿತ್ತು.

ಹಿರಿಯ ನಾಗರಿಕರ ಠೇವಣಿ ಮೇಲಿನ ಬಡ್ಡಿ ಕಡಿಮೆ ಆಗದಂತೆ ಕೆಲವು ಬ್ಯಾಂಕ್‌ಗಳು ಪ್ರತ್ಯೇಕ ಯೋಜನೆ ಹೊಂದಿವೆ. ಹಿರಿಯ ನಾಗರಿಕರು, ಎಲ್‌ಐಸಿ ನಿರ್ವಹಿಸುವ 'ಪ್ರಧಾನ ಮಂತ್ರಿ ವಯವಂದನ' ಯೋಜನೆಯಲ್ಲಿ ಹೂಡಿಕೆ ಮಾಡುವುದು ಸೂಕ್ತ. ಇದರಲ್ಲಿ ಶೇ.7.4 ರಷ್ಟು ಬಡ್ಡಿ ದರ ಸಿಗಲಿದೆಯೆಂದು ತಿಳಿಸಲಾಗಿದೆ.

ಆಧಾರ:ವಿಜಯ ಕರ್ನಾಟಕ, ದಿನಾಂಕ:23.05.2020